ಪ್ರಾಥಮಿಕ ಶಾಲಾ ಶಿಕ್ಷಕರ ಖಾಲಿ ಇರುವ ಹುದ್ದೆಗಳು.

757 - ಶ್ರೀ ಬಿ.ಎಸ್. ಯಮಿಯೂರಪ್ಪ (ಶಿಕಾರಿಪುರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1994-95 ಮಾಗೂ 1995-96ನೇ ಸಾಲಿನಲ್ಲಿ ಆಯ್ಕೆ ಮಾಡಿರುವ ಪ್ರಾಥಮಿಕ ಶಾಲಾ ಶಿಕ್ಷಕರ ಸಂಖ್ಯೆ ಎಷ್ಟು (ಜಿಲ್ಲಾವಾರು ವಿವರ ನೀಡುವುದು) ಈ ಪೈಕಿ ಮಹಿಳೆಯರು ಎಷ್ಟು ಖಾಲಿ ಇರುವ ಶಿಕ್ಷಕರ ಸಂಖ್ಯೆ ಎಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು).

ಬ) ಮಂಜೂರಾಗಿ ಖಾಲಿ ಇರುವ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳನ್ನು ತುಂಬಲಾಗಿಲ್ಲವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ. ಹಾಗಿದ್ದಲ್ಲಿ ಬಾಕಿ ಹುದ್ದೆಗಳನ್ನು ಯಾವಾಗ ತುಂಬಲಾಗುವುದು?

ಇ) ವಿದ್ಯಾರ್ಥಿ ಹಾಗೂ ಶಿಕ್ಷಕರ ಅನುಪಾತಕ್ಕೆ ತಕ್ಕಂತೆ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆ ಮಂಜೂರು ಆಗಬೇಕಾಗಿದೆ ಎಂಬ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ, ಹಾಗಿದ್ದಲ್ಲಿ ಈ ಅನುಪಾತಕ್ಕೆ ತಕ್ಕಂತೆ ಶಿಕ್ಷಕರ ಹುದ್ದೆಗಳನ್ನು ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದೆ?

ಈ) ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಯಲ್ಲಿ ಪಾರದರ್ಶಕತೆ ಇರಿಸುವುದರ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ.

ಶ್ರೀ ಹೆಚ್.ಜಿ. ಗೋವಿಂದೇಗೌಡ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ)	ಆಯ್ಕೆ ಮಾಡಿದ ಪ್ರಾ. ಶಾಲಾ ಶಿಕ್ಷಕರ ಸಂಖ್ಯೆ	ಅದರಲ್ಲಿ ಆಯ್ಕೆ ಮಾಡಿದ ಮಹಿಳಾ ಅಭ್ಯರ್ಥಿಗಳ ಸಂಖ್ಯೆ.
1994-95ನೇ ಸಾಲಿನಲ್ಲಿ	16,863	9,212
1995-96ನೇ ಸಾಲಿನಲ್ಲಿ	8,738	4,330

1995ರ ಆಯ್ಕೆಯ ನಂತರ ಖಾಲಿ ಇರುವ ಹುದ್ದೆಗಳ ಸಂಖ್ಯೆ 8744. (ಜಿಲ್ಲಾವಾರು ತಖ್ತೆ ಲಗತ್ತಿಸಿದೆ.)

ಆ) ಖಂಡಿತ. ಪ್ರಥಮ ಮತ್ತು ನೇಮಕಾತಿ ಸಮಯಗಳಲ್ಲಿ ಆಗತ್ಯ ತಿದ್ದುಪಡಿ ತಂದು ತ್ವರಿತವಾಗಿ ಖಾಲಿ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ವಿದ್ಯಾರ್ಥಿಗಳ ಹಾಗೂ ಶಿಕ್ಷಕರ ಅನುಪಾತಕ್ಕೆ ಹುದ್ದೆ ಮಂಜೂರಾಗಬೇಕೆಂಬ ಅಂಶ ಸರ್ಕಾರದ ಗಮನಕ್ಕೆ ಬಂದಿದೆ. ಈ ಉದ್ದೇಶವನ್ನು ಗಮನದಲ್ಲಿಟ್ಟುಕೊಂಡು ಸರ್ಕಾರದ ಆದೇಶ ಸಂಖ್ಯೆ: ಇಪಿ 67 ಬಿಯೂಯೂಕೆ 93 ದಿನಾಂಕ 13-4-93 ರಂತೆ 1993-94ರಿಂದ 96-97ರವರೆಗೆ 4

ವರ್ಷಗಳಿಗೆ ಪ್ರತಿ ವರ್ಷಕ್ಕೆ 5000 ಶಿಕ್ಷಕರ ಹುದ್ದೆಯಂತೆ 1993-94 ಮತ್ತು 94-95ರಲ್ಲಿ ಮಂಜೂರಾದ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. 1995-96ನೇ ಸಾಲಿನಲ್ಲಿ ಮಂಜೂರಾದ ಹುದ್ದೆಗಳನ್ನು ಭರ್ತಿಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಈ) ಇಲ್ಲ.

ರಾಜ್ಯದಲ್ಲಿ ಹೊಸ ಶಿಕ್ಷಣ ನೀತಿ.

758 - ಶ್ರೀ ರಾಮಲಿಂಗಾ ರಡ್ಡಿ (ಜಯನಗರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಹೊಸ ಶಿಕ್ಷಣ ನೀತಿಯನ್ನು ಜಾರಿಗ ತರಲು ಸರ್ಕಾರ ಉದ್ದೇಶಿಸಿದೆಯೇ?

ಆ) ಮಹಾರಾಷ್ಟ್ರದಲ್ಲಿ ಹೊಸ ಶಿಕ್ಷಣ ನೀತಿಯನ್ನು ರೂಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಅದೇ ರೀತಿ, ರಾಜ್ಯದಲ್ಲೂ ಸಹ ಹೊಸ ಶಿಕ್ಷಣ ನೀತಿಯನ್ನು ಮುಂದಿನ ಮೂರು ತಿಂಗಳೊಳಗೆ ಜಾರಿಗ ತರಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

ಶ್ರೀ ಹೆಚ್.ಸಿ. ಗೂಳಿಹಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಹೌದು.

ಆ) ಹೌದು.

ಇ) ಇದು ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ.

ಅಧ್ಯಕ್ಷರು : ಸಭೆಯ ಮುಂದೆ ಮಂಡಿಸಲಾಯಿತು.

ಪ್ರಕಟಣೆ

ಅಧ್ಯಕ್ಷರು : ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಈ ಕೆಳಕಂಡ ಸಂದೇಶವು ಬಂದಿದೆ.

ಕರ್ನಾಟಕ ವಿಧಾನ ಪರಿಷತ್ತು ದಿನಾಂಕ 5ನೇ ಮಾರ್ಚ್ 1996ರಂದು ಕರ್ನಾಟಕದ ಭೂ ಸುಧಾರಣೆಗಳ (ತಿದ್ದುಪಡಿ) ಅಧ್ಯಾದೇಶ, 1996ನ್ನು ಅನುಮೋದಿಸದೇ ತಿರಸ್ಕರಿಸಲಾಯಿತು ಎಂದು ತಿಳಿಸುತ್ತೇನೆ.

ವರದಿಗಳನ್ನು ಒಪ್ಪಿಸುವುದು.

ಶ್ರೀ ಬಿ.ಕೆ. ನಾಗಪ್ಪ (ಅಧ್ಯಕ್ಷರು, ಲೋಕೋಪಯೋಗಿ ಮತ್ತು ನೀರಾವರಿ ಇಲಾಖಾ ವಿಷಯ ಸಮಿತಿ) : ಮಾನ್ಯ ಅಧ್ಯಕ್ಷರೇ, ಆಲಮಟ್ಟಿ ಜಲಾಶಯದಲ್ಲಿ ಮುಳುಗಡೆಯಾದ ಪ್ರದೇಶದ ಜನರಿಗೆ